# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 296
ಸದಸ್ಯರ ಹೆಸರು :ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 21.12.2022.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಮನಗರ ಜಿಲ್ಲೆ ಮಾಗಡಿ ತಾಲ್ಲೂಕಿನ ಕುದೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಶಿವಗಂಗೆ ರಸ್ತೆಯ ಕೆರೆ ಅಂಚಿನಲ್ಲಿ 46 ಅಲೆಮಾರಿ ಕುಟುಂಬಗಳು ಗುಡಿಸಲುಗಳನ್ನು ಕಟ್ಟಿಕೊಂಡು ಯಾವುದೇ ನಾಗರೀಕ ಸೌಲಭ್ಯಗಳಿಲ್ಲದೆ ಜೀವನ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸುಮಾರು 50 ಅಲೆಮಾರಿ ಕುಟುಂಬಗಳು ಅನಧಿಕೃತವಾಗಿ ಕೆರೆ ಅಂಗಳದಲ್ಲಿ ತಾತ್ಕಾಲಿಕವಾಗಿ ಗುಡಿಸಲು ನಿರ್ಮಿಸಿಕೊಂಡು ವಾಸಿಸುತ್ತಿದ್ದು, ಕಳೆದ ಬಾರಿ ಸುರಿದ ಬಾರಿ ಮಳೆಯಿಂದ ಕೆರೆ ಅಂಗಳ ನೀರಿನಿಂದ ಆವೃತವಾಗಿ ಮನೆಗಳು ಮಳೆ ನೀರಿನಿಂದ ಮುಳುಗಡೆಯಾದ ಕಾರಣ ಸದರಿ ಕುಟುಂಬಗಳನ್ನು ಕಾಳಜಿ ಕೇಂದ್ರಕ್ಕೆ ವರ್ಗಾಯಿಸಲಾಗಿರುತ್ತದೆ. ಹಾಗೂ ಪ್ರತಿ ಕುಟುಂಬಕ್ಕೆ ತಲಾ 10 ಸಾವಿರ ರೂಪಾಯಿಗಳನ್ನು ವಿತರಿಸಲಾಗಿರುತ್ತದೆ. |
| ಆ) | ಈ ಅಲೆಮಾರಿಗಳು ವಾಸಿಸುತ್ತಿರುವ ಕೆರೆಯನ್ನು ಇತ್ತೀಚಿಗೆ ಕಂದಾಯ ಇಲಾಖೆಯ ಅಧಿಕಾರಿಗಳು ಸರ್ವೇ ಮಾಡಿದ್ದು, ಗುಡಿಸಲುಗಳನ್ನು ತೆರವು ಮಾಡುವಂತೆ ನೋಟೀಸ್ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಳತೆ ಕಾರ್ಯ ಪೂರ್ಣಗೊಳಿಸಲಾಗಿದ್ದು, ಕೆರೆ ಅಂಗಳದಲ್ಲಿ ಗುಡಿಸಲು ನಿರ್ಮಿಸಿಕೊಂಡು ವಾಸಿಸುತ್ತಿದ್ದ ಕುಟುಂಬಗಳಿಗೆ ಗುಡಿಸಲು ತೆರವು ಮಾಡುವಂತೆ ಯಾವುದೇ ನೋಟೀಸ್ ನೀಡಿರುವುದಿಲ್ಲ. |
| ಇ) | ಬಂದಿದ್ದಲ್ಲಿ, ಯಾವುದೇ ಸರ್ಕಾರದ ಸೌಲಭ್ಯಗಳನ್ನು ಪಡೆಯದ ಇವರಿಗೆ ಶಾಶ್ವತವಾದ ಸೂರು ಕಲ್ಪಿಸಿ ಸರ್ಕಾರದಿಂದ ಸವಲತ್ತುಗಳನ್ನು ಒದಗಿಸಲು ಸರ್ಕಾರ ಯಾವುದಾದರೂ ಯೋಜನೆಯನ್ನು ರೂಪಿಸುವುದೇ; (ವಿವರ ನೀಡುವುದು) | ಅರ್ಹ ಅಲೆಮಾರಿ ಕುಟುಂಬಗಳಿಗೆ ಶಾಶ್ವತ ಸೂರು ಕಲ್ಪಿಸುವ ಉದ್ದೇಶದಿಂದ ಮಾಗಡಿ ತಾಲ್ಲೂಕು, ಕುದೂರು ಹೋಬಳಿ, ಕುದೂರು ಗ್ರಾಮದ ಸ.ನಂ.199 ರಲ್ಲಿ 1-00 ಎಕರೆ ಸರ್ಕಾರಿ ಜಮೀನನ್ನು ನಿವೇಶನ ಹಂಚಿಕೆಗೆ ಕಾಯ್ದಿರಿಸಲಾಗಿದೆ. |

ಸಂಖ್ಯೆ: ಆರ್‌ಡಿ 265 ಎಲ್‌ಜಿಕ್ಯೂ 2022

(ಆರ್.ಅಶೋಕ)
ಕಂದಾಯ ಸಚಿವರು